ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳು

510(647); ಶ್ರೀ ಕಾಶಪ್ಪನವರ್ ವಿಜಯಾನಂದ್ ಶಿವಶಂಕರಪ್ಪ (ಹುನಗುಂದ)

ಅ) ಹುನಗುಂದ ತಾಲೂಕಿನಲ್ಲಿರುವ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು;

ಆ) ಈ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಕೀಯ, ಅರೆ ವೈದ್ಯಕೀಯ (ಪ್ಯಾರಾ ಮೆಡಿಕಲ್) ಮತ್ತು ವೈದ್ಯಕೀಯೇತರ ಸಿಬ್ಬಂದಿ ಸಂಖ್ಯೆ ಎಷ್ಟು; ವಿವರಗಳನ್ನು ಒದಗಿಸುವುದು;

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ತಕ್ಷಣ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದೇ;

ಈ) ಇಳಕಲ್ ಮತ್ತು ಹುನಗುಂದ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳು ಯಾವುವು?

ಉ) ಈ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ;

ಊ) ಹುನಗುಂದ ತಾಲ್ಲೂಕಿನ ಸುಳೇಭಾವಿ ಪ್ರಾಥಮಿಕ ಆರೋಗ್ಯ ಕೇಂದ್ರವು ಸುತ್ತಮುತ್ತಲಿನ ಅನೇಕ ಹಳ್ಳಿಗಳಿಗೆ ಕೇಂದ್ರ ಸ್ಥಳದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಋ) ಹಾಗಿದ್ದಲ್ಲಿ ಇಲ್ಲಿ ಸುಸಜ್ಜಿತ ಕಟ್ಟಡ ಇರುವುದರಿಂದ ಇದನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹುನಗಂದ ತಾಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ–14, ಸಮುದಾಯ ಆರೋಗ್ಯ ಕೇಂದ್ರ–1

ಸಾರ್ವಜನಿಕ ಆಸ್ಪತ್ರೆ–2 ಇರುತ್ತವೆ. ಆದರೆ ಪ್ರಾಥಮಿಕ ಆರೋಗ್ಯ ಘಟಕ ಇರುವುದಿಲ್ಲ.

ಆ) ಈ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಕೀಯ, ಅರೆ ವೈದ್ಯಕೀಯ (ಪ್ಯಾರಾ ಮೆಡಿಕಲ್) ಮತ್ತು ವೈದ್ಯಕೀಯೇತರ ಸಿಬ್ಬಂದಿ ವಿವರ ಈ ಕೆಳಕಂಡಂತಿದೆ.

ಸಾಮಾನ್ಯ ವೈದ್ಯಾಧಿಕಾರಿಗಳು	03
ತಜ್ಞ ವೈದ್ಯರು	17
ಕಿರಿಯ ವೈದ್ಯೇತರ ಮೇಲ್ವಿಚಾರಕರು	01
ಶುಶ್ರೂಷಾ ಅಧೀಕ್ಷಕರು ದರ್ಜೆ –2	2
ಹಿರಿಯ ಶುಶ್ರೂಷಕಿ	01
ಹಿರಿಯ ಆರೋಗ್ಯ ಸಹಾಯಕ (ಪು)	05
ಹಿರಿಯ ಆರೋಗ್ಯ ಸಹಾಯಕ (ಮ)	05
ಫಾರ್ಮಸಿಸ್ಟ (ಹಿರಿಯ)	01
ಫಾರ್ಮಸಿಸ್ಟ (ಕಿರಿಯ)	03
ಶುಶ್ರೂಷಕರು	05
ಪ್ಯಾರಾ ಮೆಡಿಕಲ್ ವರ್ಕರ್	02
ಹಿರಿಯ ಪ್ರಯೋಗಶಾಲಾ ತಂತ್ರಜ್ಞರು	01
ಕಿರಿಯ ಪ್ರಯೋಗಶಾಲೆ ತಂತ್ರಜ್ಞರು	01
ಕಿರಿಯ ಆರೋಗ್ಯ ಸಹಾಯಕ (ಪು)	20
ಕಿರಿಯ ಆರೋಗ್ಯ ಸಹಾಯಕ (ಮ)	20
ಕ್ಲರ್ಕ ಕಂ ಟೈಪಿಸ್ಟ	2
ಪ್ರ.ದ.ಸ	11
ಕಛೇರಿ ಅಧೀಕ್ಷಕರು	2
ವಾಹನ ಚಾಲಕರು	5
ಡಿ ವರ್ಗ	73

ಇ) ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧ –1 ರಲ್ಲಿ ನೀಡಲಾಗಿದೆ.

ಈ) ಸಾರ್ವಜನಿಕ ಆಸ್ಪತ್ರೆ ಇಳಕಲ್ ನಲ್ಲಿ ಈ ಕೆಳಕಂಡಂತೆ ತಲಾ ಒಂದು ತಜ್ಞ ವೈದ್ಯರ ಹುದ್ದೆ ಖಾಲಿ ಇವೆ.

1) ಓ.ಬಿ.ಜಿ.
2) ಕೀವು, ಮೂಗು, ಗಂಟಲು ತಜ್ಞರು
3) ನೇತ್ರ ತಜ್ಞರು
4) ಜನರಲ್ ಸರ್ಜರಿ
5) ಮಕ್ಕಳ ತಜ್ಞರು
6) ಅರವಳಿಕೆ ತಜ್ಞರು
7) ದಂತ ಆರೋಗ್ಯಾಧಿಕಾರಿ

ಸಾರ್ವಜನಿಕ ಆಸ್ಪತ್ರೆ ಹುನಗುಂದ ನಲ್ಲಿ ಈ ಕೆಳಕಂಡಂತೆ ತಲಾ ಒಂದು ತಜ್ಞ ವೈದ್ಯರು ಹುದ್ದೆ ಖಾಲಿ ಇವೆ.

1) ಓ.ಬಿ.ಜಿ
2) ಎಲುವು ಕೀಲು ತಜ್ಞರು
3) ನೇತ್ರ ತಜ್ಞರು
4) ಜನರಲ್ ಮೆಡಿಸನ್
5) ಮುಖ್ಯ ವೈದ್ಯಾಧಿಕಾರಿ
6) ಚರ್ಮರೋಗ ತಜ್ಞರು
7) ದಂತ ಆರೋಗ್ಯಧಾಕಾರಿ

ಊ) ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ನೀಡಲು ಅವಕಾಶ ಕಲ್ಪಿಸಲಾಗಿದೆ.

ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ತಜ್ಞರು ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ದಿಂದ ₹ 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸದ್ದಾಗೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗು ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

ಕರ್ನಾಟಕ ಲೋಕಸಭಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

ಊ) ಬಂದಿದೆ.

ಋ) ಸರ್ಕಾರದ ಆದೇಶ ಸಂಖ್ಯೆ: ಆಕುಕ/ 350/ ಸಿಜಿಎಂ/ 2010, ದಿನಾಂಕ:11-01-2011ರಲ್ಲಿ ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಗಳ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ತಕ್ಷಣದಿಂದ ಜಾರಿಗೆ ಬರುವಂತೆ 3 ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ದಿಂದ ₹ 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ / ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸಭಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ 118 ಅಲೋಪತಿ ಮತ್ತು 45 ಆಯುಷ್ ಹಾಗೂ 230 ಬಂಧ-ಪತ್ರ ಅನುಷ್ಠಾನಕೋಶದಿಂದ ನೇಮಕಗೊಂಡ ವೈದ್ಯರು ಸೇರಿದಂತೆ ಒಟ್ಟು 2341 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 245 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿವೆ. ದಿನಾಂಕ:28-6-2013 ರಂದು ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು

ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ. ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ.

7. ಇಲಾಖೆಯಲ್ಲಿ ಬ್ಯಾಕ್ ಲಾಗ್ ಇದ್ದ ಹುದ್ದೆಗಳಲ್ಲಿ 107 ಕಿರಿಯ ಆರೋಗ್ಯ ಸಹಾಯಕರು (ಪುರುಷ) ಮತ್ತು 16 ಫಾರ್ಮಸಿಸ್ಟ್ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಇತ್ತೀಚಿಗೆ ನೀಡಲಾಗಿದೆ.

8. ಆರೋಗ್ಯ ಇಲಾಖೆಯಲ್ಲಿ ಈ ಕೆಳಕಂಡ ನೇರ ನೇಮಕಾತಿ ಮಾಡಲು ಪ್ರಕ್ರಿಯೆ ಜಾರಿಯಲ್ಲಿದ್ದು ಈ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ.

ಕ್ರ. ಸಂ.	ಹುದ್ದೆಗಳ ಪದನಾಮ	ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ
1	ಕಿರಿಯ ಆರೋಗ್ಯ ಸಹಾಯಕರು (ಪುರುಷ)	314
2	ಕಿರಿಯ ಆರೋಗ್ಯ ಸಹಾಯಕರು (ಮಹಿಳೆ)	735
3	ಕುಷ್ಠರೋಗದಿಂದ ಗುಣಮುಖ ಹೊಂದಿದ ಗ್ರೂಪ್ 'ಡಿ' ಹುದ್ದೆಗಳು	100
4	ಹಾಸ್ಪಿಟಲ್ ಅಟೆಂಡೆಂಟ್ ಗ್ರೇಡ್–2 ಗ್ರೂಪ್ 'ಡಿ'	2323
	ಒಟ್ಟು	**3579**

9. ಈ ಕೆಳಕಂಡ ಖಾಲಿ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಭರ್ತಿ ಮಾಡಲು ಆರ್ಥಿಕ ಇಲಾಖೆ ಅನುಮತಿ ನೀಡಿದ್ದು, ಹೈದ್ರಾಬಾದ್– ಕರ್ನಾಟಕ ಭಾಗದ ಮೀಸಲಾಗಿ ನಿಯಮಗಳ ಬಗ್ಗೆ ಆದೇಶ ಬಂದ ತಕ್ಷಣ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕ್ರ.ಸಂ.	ಹುದ್ದೆ	ಭರ್ತಿ ಮಾಡುವ ಸಂಖ್ಯೆ
1	ವಾಹನ ಚಾಲಕರು	318
2	ಗ್ರೂಪ್ ಸಿ ವೃಂದದ ಅರೆವೈದ್ಯಕೀಯ ಹುದ್ದೆಗಳು	450
3	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ	331
4	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ	145
5	ಹಿರಿಯ ಪ್ರಯೋಗ ಶಾಲಾ ಟೆಕ್ನಾಲಾಜಿಸ್ಟ್	87
	ಒಟ್ಟು	**1331**